# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 1606 (1850)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಅರಣ್ಯ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

ವಿಷಯ : ಕೊಡಗು ಜಿಲ್ಲೆಯಲ್ಲಿ ಹುಲಿ ಹಾಗೂ ಕಾಡಾನೆಗಳ ದಾಳಿ ಬಗ್ಗೆ

(ಅ) ಕೊಡಗು ಜಿಲ್ಲೆಯಲ್ಲಿ ಹುಲಿ ಮತ್ತು ಕಾಡಾನೆಗಳು ಕಾಡಿನಿಂದ ಹೊರಬಂದು ಗ್ರಾಮಗಳು, ಕಾಫಿ ತೋಟಗಳು ಹಾಗೂ ಇತರೆ ಜಮೀನುಗಳಲ್ಲಿ ಸಂಚರಿಸುತ್ತಿರುವುದರಿಂದ, ರೈತರು ಹಾಗೂ ಸಾರ್ವಜನಿಕರು ಭಯದ ವಾತಾವರಣದಲ್ಲೇ ಬದುಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ಗ್ರಾಮಗಳು, ಕಾಫಿ ತೋಟಗಳು ಹಾಗೂ ಇತರೆ ಜಮೀನುಗಳಲ್ಲಿ ಬೀಡುಬಿಟ್ಟಿರುವ ಅಥವಾ ಸಂಚರಿಸುತ್ತಿರುವ ಎಷ್ಟು ಹುಲಿ ಮತ್ತು ಕಾಡಾನೆಗಳನ್ನು ಸೆರೆಹಿಡಿಯಲಾಗಿದೆ ಹಾಗೂ ಎಲ್ಲಿಗೆ ಸ್ಥಳಾಂತರ ಮಾಡಲಾಗಿದೆ;

(ಇ) ಈ ರೀತಿಯಲ್ಲಿ ನಿರಂತರವಾಗಿ ನಡೆಯುತ್ತಿರುವ ವನ್ಯಜೀವಿ-ಮಾನವ ಸಂಘರ್ಷ ತಪ್ಪಿಸಲು ಜಿಲ್ಲೆಯಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?